**(ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಪರವಾಗಿ):** ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಹಾಗೂ ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕವನ್ನು ಮಂಡಿಸುತ್ತೇನೆ.

**ಅಧ್ಯಕ್ಷರು:** ವಿಧೇಯಕವನ್ನು ಮಂಡಿಸಲಾಗಿದೆ. ** ಅನುಬಂಧ–III

---

**ಅನುಬಂಧ**

**ಅಧ್ಯಕ್ಷರು:** ಈಗ ಸದನವನ್ನು ದಿನಾಂಕ: 03.03.2011ರಂದು ಗುರುವಾರ ಬೆಳಿಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು 4 ಗಂಟೆ 43 ನಿಮಿಷಕ್ಕೆ ಮುಕ್ತಾಯಗೊಂಡು
ದಿನಾಂಕ: 03.03.2011ರಂದು ಬೆಳಿಗ್ಗೆ 11.00 ಗಂಟೆಗೆ
ಸಮಾವೇಶಗೊಳ್ಳಲು ನಿಶ್ಚಯಿಸಿತು)

## 7. ಅನುಬಂಧ–I

**ಪ್ರವಾಸಿ ತಾಣಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ**

110 (371) ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರ ಇದುವರೆವಿಗೂ ಯಾವ ಯಾವ ಸ್ಥಳಗಳನ್ನು ಪ್ರವಾಸಿ ತಾಣಗಳೆಂದು ಗುರುತಿಸಲಾಗಿದೆ; (ವಿವರಗಳನ್ನು ನೀಡುವುದು)

ಆ) ಈಗ ಗುರುತಿಸಿರುವ ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಪ್ರವಾಸಿ ತಾಣಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

ಈ) ನಂದಿ ಬೆಟ್ಟಕ್ಕೆ ರಾತ್ರಿ ವೇಳೆ ಬರುವ ಪ್ರವಾಸಿಗರಿಗೆ ವಾಸ್ತವ್ಯ ಹೂಡಲು ಸಾಕಷ್ಟು ವಸತಿ ಗೃಹಗಳಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಊ) ಹಾಗಿದ್ದಲ್ಲಿ, ನಂದಿ ಬೆಟ್ಟದಲ್ಲಿ ಸುಸಜ್ಜಿತ ಬಹುಮಹಡಿಗಳ ವಸತಿ ಗೃಹಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಂದಿನಿಂದ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು;

ಋ) 2009–10 ಮತ್ತು 2010–11ನೇ ಸಾಲಿನಲ್ಲಿ ಸರ್ಕಾರ ಗುರುತಿಸಿರುವ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು;

ಌ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ವಿನಿಯೋಗಿಸಲಾಗಿದೆ ; (ಪೂರ್ಣ ವಿವರಗಳನ್ನು ನೀಡುವುದು) ?

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು):

ಅ) ಚಿಕ್ಕಬಳ್ಳಾಪುರ ವಿಧಾನ ಸಭಾ ಕ್ಷೇತ್ರದಲ್ಲಿ ಈ ಕೆಳಕಂಡ ಸ್ಥಳಗಳನ್ನು ಪ್ರವಾಸಿ ತಾಣಗಳೆಂದು ಗುರುತಿಸಲಾಗಿದೆ.

1. ನಂದಿ ಬೆಟ್ಟ
2. ನಂದಿ ಗ್ರಾಮ
3. ಮುದ್ದೇನಹಳ್ಳಿ
4. ರಂಗಸ್ಥಳ

ಆ) ಹೌದು.

ಇ) ಹೌದು.

ಈ) ಹೌದು.

ಉ) ಬಹುಮಹಡಿ ವಸತಿ ಗೃಹ ನಿರ್ಮಿಸುವ ಪ್ರಸ್ತಾವನೆ ಇಲಾಖೆಯ ಮುಂದೆ ಇರುವುದಿಲ್ಲ. ಆದರೆ ಹಾಲಿ ಇರುವ ವಸತಿ ಗೃಹಗಳನ್ನು ಉನ್ನತೀಕರಿಸುವುದು ಕೆಲವು ವಸತಿ ಗೃಹಗಳನ್ನು ಮರು ನಿರ್ಮಾಣ ಮಾಡಲಾಗುವುದು. ಈ ಸಂಬಂಧ ಟೆಂಡರುಗಳನ್ನು ಕರೆಯಲಾಗಿದ್ದು ಟೆಂಡರ್ ಪ್ರಕ್ರಿಯೆ ಅಂತಿಮಗೊಂಡ ನಂತರ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.

ಊ) ಚಿಕ್ಕಬಳ್ಳಾಪುರ ವಿಧಾನ ಸಭಾ ಕ್ಷೇತ್ರದಲ್ಲಿ ಗುರುತಿಸಲಾಗಿರುವ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ. ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದ ವರ್ಷವಾರು ಮೊತ್ತ ಈ ಕೆಳಗಿನಂತಿದೆ.

1. 2009–10 ರೂ. 89.00 ಲಕ್ಷಗಳು
2. 2010–11 ರೂ. 20.00 ಲಕ್ಷಗಳು

ಖ) ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳ ವಿವರಗಳು ಕೆಳಗಿನಂತಿವೆ:

1. ರೂ. 100.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಂದಿ ಬೆಟ್ಟದ ಪ್ರದೇಶದಲ್ಲಿ ಉದ್ಯಾನವನ ಅಭಿವೃದ್ಧಿಪಡಿಸುವ ಯೋಜನೆಗಾಗಿ ಸುವರ್ಣ ಕರ್ನಾಟಕ ಉದ್ಯಾನವನದ ಪ್ರತಿಷ್ಠಾನಕ್ಕೆ ರೂ. 30.00 ಲಕ್ಷಗಳನ್ನು 2009–10ನೇ ಸಾಲಿನಲ್ಲಿ ಬಿಡುಗಡೆ ಮಾಡಲಾಗಿದೆ.
2. ರೂ. 50.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಮುದ್ದೇನಹಳ್ಳಿ ಸರ್ ಎಂ. ವಿಶ್ವೇಶ್ವರನ್ನಯವರು ವಾಸಿಸುತ್ತಿದ್ದ ಮನೆ ದುರಸ್ತಿ ಮತ್ತು ಆವರಣ ಗೋಡೆಯನ್ನು ಮರು ನಿರ್ಮಾಣ ಮಾಡಲಾಗಿದೆ. ರೂ. 14.50 ಲಕ್ಷಗಳಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ.
3. ನಂದಿ ಗ್ರಾಮದಲ್ಲಿ ರೂ. 14.50 ಲಕ್ಷಗಳ ವೆಚ್ಚದಲ್ಲಿ ಉತ್ತಮವಾದ ಕುಡಿಯುವ ನೀರು ಮತ್ತು ಶೌಚಾಲಯ ನಿರ್ಮಿಸಲು ಕರ್ನಾಟಕ ಭೂ ಸೇನಾ ನಿಗಮಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ. ನಿರ್ಮಾಣ ಕಾಮಗಾರಿಯನ್ನು ಎ.ಎಸ್.ಐ. ಅಧಿಕಾರಿಗಳು ಸ್ಥಗಿತಗೊಳಿಸಿರುತ್ತಾರೆ.

**ಚಿಕ್ಕಬಳ್ಳಾಪುರ ನಗರ ಸಭೆಗೆ ಯು.ಜಿ.ಡಿ. ಕಾಮಗಾರಿಗೆ ಬಿಡುಗೆಯಾಗಿರುವ ಅನುದಾನ**

111 (372) ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ): ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರ ಸಭೆಗೆ ಕಳೆದ 3 ವರ್ಷಗಳಲ್ಲಿ ಯು.ಜಿ.ಡಿ. ಕಾಮಗಾರಿಗಳಿಗಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಮೊತ್ತವೆಷ್ಟು;

ಆ) ಚಿಕ್ಕಬಳ್ಳಾಪುರ ನಗರ ಸಭೆಗೆ ಕಳೆದ 3 ವರ್ಷಗಳಲ್ಲಿ ಯು.ಜಿ.ಡಿ. ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ಕಾಮಗಾರಿಗಳವಾರು ವಿವರಗಳನ್ನು ನೀಡುವುದು)